ಇ) ಬ್ಯಾಟರಿ ಚಾಲಿತ ವಾಹನಗಳು ಕೆಟ್ಟು ನಿಂತ ಕೂಡಲೇ ದುರಸ್ಥಿಗೊಳಿಸಲು ಕ್ರಮವನ್ನು ಜರುಗಿಸಲಾಗುತ್ತಿದೆ. (ಹೀಗಾಗಿ ಪರ್ಯಾಯ ಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ).

ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಹೊಸ ಪಾಲಿಟೆಕ್ನಿಕ್ ಕಾಲೇಜು

574(1317), ಶ್ರೀ ಅಶೋಕ್ ಖೇಣಿ(ಬೀದರ್ ದಕ್ಷಿಣ)

ಅ) 2014–15ನೇ ಸಾಲಿನಲ್ಲಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಇದೆ.

ಆ) ಪ್ರಸ್ತಾವನೆಗಳನ್ನು ಪರಿಶೀಲಿಸಲಾಗುತ್ತಿದ್ದು, ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ, ಹಣಕಾಸಿನ ಅಗತ್ಯತೆ ಹಾಗೂ ಕೇಂದ್ರ ಸರ್ಕಾರದ (ಎ.ಐ.ಸಿ.ಟಿ.ಇ.) ಅನುಮತಿ ಅನುಸಾರ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.